# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/378/ಗ್ರಾಪಂಕಾ/2016 ದಿನಾಂಕ:14.09.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/372/2016/ARE-10 ದಿನಾಂಕ:10.04.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/372/2016/ARE-10 ದಿನಾಂಕ:12.04.2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/378/ಗ್ರಾಪಂಕಾ/2016 ದಿನಾಂಕ:04.05.2018.
5. ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 04.06.2018.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು–5, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ ಈ ಕೆಳಕಂಡ ದೋಷರೋಪಣೆಗಳನ್ನು ನೀಡಿರುತ್ತಾರೆ.

**"ದೋಷಾರೋಪಣೆ"**

"ಆಪಾದಿತ ಸರ್ಕಾರಿ ನೌಕರರಾದ ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ರವರು 1999 ರಲ್ಲಿ ಪ್ರಭಾರಿ ಕಾರ್ಯದರ್ಶಿಯಾಗಿ ಹುದ್ದೆ ನಿರ್ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ ತುಮಕೂರು ರವರಿಂದ 2004 ರ ಅವಧಿಯಲ್ಲಿ 2–3 ಅಧಿಕಾರಿಗಳು ಅಲ್ಲಿ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸಿದ್ದಾರೆ. ಸದರಿಯವರು ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿದ್ದು ಸದರಿಯವರ ಸೇವಾ ಪುಸ್ತಕವನ್ನು ಸ್ವತಃ ಬರೆದುಕೊಂಡು ಲೋಪವೆಸಗಿದಲ್ಲದೆ ಮುದ್ದೇನಹಳ್ಳಿ ಗ್ರಾಮದಲ್ಲಿ ಅನುಮತಿ ಇಲ್ಲದೆ 40 ರಿಂದ 50 ಲಕ್ಷ ರೂಪಾಯಿ ಬೆಲೆ ಬಾಳುವ ಮನೆಯನ್ನು ಕಟ್ಟಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿರವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸಿದ ವೇಳೆಯಲ್ಲಿ 1999 ರಲ್ಲಿ ಪ್ರಭಾರಿ ಕಾರ್ಯದರ್ಶಿಯಾಗಿ ಹುದ್ದೆ ನಿರ್ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ,

ತುಮಕೂರು ರವರಿಂದ ಆದೇಶ ಪಡೆದಿದ್ದು, 2004 ರ. ನಂತರದ ಅವಧಿಯಲ್ಲಿ 2, 3 ಅಧಿಕಾರಿಗಳು ಅಲ್ಲಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಸದರಿಯವರು ಅನಧಿಕೃತವಾಗಿ ಕಾರ್ಯ ನಿರ್ವಹಿಸಿದ್ದು ಸದರಿಯವರ ಸೇವಾ ಪುಸ್ತಕವನ್ನು ಸ್ವತಃ ಬರೆದುಕೊಂಡು ಲೋಪವವೆಸಗಿದ್ದಲ್ಲದೆ ಮುದ್ದೇನಹಳ್ಳಿ ಗ್ರಾಮದಲ್ಲಿ ಅನುಮತಿ ಇಲ್ಲದೆ 40 ರಿಂದ 50 ಲಕ್ಷ ರೂಪಾಯಿ ಬೆಲೆ ಬಾಳುವ ಮನೆಯನ್ನು ಕಟ್ಟಿರುತ್ತಾರೆ ಎಂಬ ಹಿನ್ನೆಲೆಯಲ್ಲಿ ಇಲಾಖಾ ವಿಚಾರಣೆಯಲ್ಲಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಪಿಂಚಣಿಯಲ್ಲಿ ಶೇ.10 ರಷ್ಟನ್ನು ಶಾಶ್ವತವಾಗಿ ಕಡಿತಗೊಳಿಸುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರ ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ. ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

The DGO was retired from services on 30.04.2015 The Complainant was filed on 18.03.2015. Therefore the contention of the DGo that he has constructed the house after his retirement cannot be accepted. The DGO also has not produced any document on record to show that his properties are declared in Assets and liabilities statement. The DGO without having any authority has written his own service record. DGO has not denied that 2 to 3 Secretaries have worked from the year 1999 to 2004.

The oral and documentary evidence on record clearly reveals clearly reveals that during the year 1999, the DGO was working as incharge Secretary and PDO as pe the orders of Chief Executive Officer Zilla Panchayath, Tumkur. But he himself haswritten his service record though 2 to 3 Secretaries have worked from the competent Apart from that without any prior permission from the competent Authority the DGO has constructed the house in Muddenahalli Village worth RS. 40 to 50 lakhs.

Thereby the DGO, being a Government/Public servant has failed to maintain absolute integrity besides devotion to duty and acted in a manner unbecoming of a Government servant as enumerated U/R 3(1) of Karnataka Civil Service (Conduct) Rules 1966. Hence, I proceed to answer point No.1 in the affirmative.

Disciplinary Authority has proved the charge as ramed against DGO Sri Malikarjuna Murthy (Retired), Secretary and project Development Officer, Ammasandra Village Panchayath, Dandinashivara hobli, Turuvekere Taluk, Tumkur District.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

ಶ್ರೀಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, ರವರ ನಿವೃತ್ತಿ ವೇತನದಲ್ಲು ಶೇ.10 ರಷ್ಟು ಹಣವನ್ನು ಶಾಶ್ವತವಾಗಿ ಕಡಿತಗೊಳಿಸುವ ದಂಡನೆ ವಿಧಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪ ಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಅಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ನಿವೃತ್ತಿ ವೇತನದಲ್ಲಿ ಶೇ.10 ರಷ್ಟು ಹಣವನ್ನು ಶಾಶ್ವತವಾಗಿ ಕಡಿತಗೊಳಿಸುವ ದಂಡನೆ ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:378:ಗ್ರಾಪಂಕಾ2018 ಬೆಂಗಳೂರು, ದಿನಾಂಕ-13-08-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸಿದ ವೇಳೆಯಲ್ಲಿ ಸದರಿಯವರ ವಿರುದ್ಧ ದಾಖಲಾದ ಇಲಾಖಾ ವಿಚಾರಣೆಯಲ್ಲಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ನಿವೃತ್ತಿ ವೇತನದಲ್ಲಿ ಶೇ.10 ರಷ್ಟು ಹಣವನ್ನು ಶಾಶ್ವತವಾಗಿ ಕಡಿತಗೊಳಿಸುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
13/8
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

13/08

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಎಂ. ಮಲ್ಲಿಕಾರ್ಜುನ ಮೂರ್ತಿ, ಕಾರ್ಯದರ್ಶಿ, ಅಮ್ಮಸಂದ್ರ ಗ್ರಾಮ ಪಂಚಾಯಿತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.